(ಸದನವು ಸಂಜೆ 6 ಗಂಟೆಗೆ ಮುಂದೂಡಲ್ಪಟ್ಟು ಪುನಃ ದಿ:11ನೇ ಮಾರ್ಚ್ ಮಾಹೆ 2003ರ ಮಂಗಳವಾರದಂದು ಬೆಳಿಗ್ಗೆ 11 ಗಂಟೆಗೆ ಸೇರಲು ನಿಶ್ಚಯಿಸಿತು)

ಅನುಬಂಧ (ಅ)

**ಗುಲ್ಬರ್ಗಾ ವಿಭಾಗದ ವ್ಯಾಪ್ತಿಯಲ್ಲಿ ಬರುವ ಕೃಷ್ಣ ಮೇಲ್ದಂಡೆ ಯೋಜನೆಯಲ್ಲಿ ಕಳೆದುಕೊಂಡ ಜಮೀನಿಗೆ ಪರಿಹಾರ**

581 (295) ಶ್ರೀ ಅಮರೇಶಗೌಡ ಪಾಟೀಲ್ ಬಯ್ಯಾಪುರ (ಲಿಂಗಸೂಗೂರು): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗುಲ್ಬರ್ಗಾ ವಿಭಾಗದ ವ್ಯಾಪ್ತಿಯಲ್ಲಿ ಬರುವ ಕೃಷ್ಣಾ ಮೇಲ್ದಂಡೆ ಮುಳುಗಡೆಯಾದ ಹಾಗೂ ಸದರಿ ಯೋಜನೆಗೆ ಭೂಸ್ವಾಧೀನ ಪಡಿಸಿಕೊಂಡ ರೈತರ ಜಮೀನಿಗೆ ಪರಿಹಾರ ಧನವನ್ನು ಎಕರೆವಾರು ಹೆಚ್ಚಿಸಲು ಸರ್ಕಾರವು ಕ್ರಮವನ್ನು ತೆಗೆದುಕೊಂಡಿದೆಯೇ?

ಆ) ಹಾಗಿದ್ದಲ್ಲಿ ಸದರಿ ಪ್ರಸ್ತಾವನೆಯು ಯಾವ ಹಂತದಲ್ಲಿದೆ?

ಇ) ಈ ಪ್ರಸ್ತಾವನೆಯು ವಿಳಂಬವಾಗಲು ಕಾರಣಗಳೇನು?

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು):

ಅ) ಕ್ರಮ ತೆಗೆದುಕೊಳ್ಳಲಾಗಿದೆ.

ಆ) ಕೃಷ್ಣಾ ಮೇಲ್ದಂಡೆ ಯೋಜನೆ ಅಡಿ ಗುಲ್ಬರ್ಗಾ ವಿಭಾಗದಲ್ಲಿ ಭೂಸ್ವಾಧೀನವಾಗುವ ಜಮೀನುಗಳಿಗೆ ಬೆಲೆ ಪರಿಷ್ಕರಿಸುವ ಬಗ್ಗೆ ವಿಭಾಗಾಧಿಕಾರಿಗಳಿಂದ ಪ್ರಸ್ತಾವನೆ ಸ್ವೀಕೃತವಾಗಿದ್ದು, ಪರಿಸೀಲಿಸಿ ಆರ್ಥಿಕ ಇಲಾಖೆ ಸಹಮತಿ ಪಡೆಯಲಾಗಿದೆ. ಸೂಕ್ತ ಆದೇಶವನ್ನು ಹೊರಡಿಸಲು ಸಚಿವ ಸಂಪುಟದ ಅನುಮತಿ ಪಡೆಯುವ ಹಂತದಲ್ಲಿದೆ.

ಇ) ಈ ಪ್ರಕರಣದಲ್ಲಿ ಯಾವುದೇ ತರಹೇ ವಿಳಂಬವಿರುವುದಿಲ್ಲ.

**ಚಿಕ್ಕಬಳ್ಳಾಪುರ ತಾಲ್ಲೂಕಿನ ಸಾಂಬಾರ ಗಿಡ ಕಾವಲು ಅರಣ್ಯ ಪ್ರದೇಶದ ಜಮೀನಿನ ವಿತರಣೆ**

582 (1068) ಶ್ರೀಮತಿ ಅನುಸೂಯಮ್ಮ ನಟರಾಜನ್ ಕೆ.ವಿ. (ಚಿಕ್ಕಬಳ್ಳಾಪುರ) : ಮಾನ್ಯ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಚಿಕ್ಕಬಳ್ಳಾಪುರ ತಾಲ್ಲೂಕಿನ ಸಾಂಬಾರ ಗಿಡ ಕಾವಲು ಅರಣ್ಯ ಪ್ರದೇಶದಲ್ಲಿ ಬಹಳ ಹಿಂದಿನ ಕಾಲದಿಂದಲೂ ಬಡ ರೈತರು ಒಕ್ಕಲುತನ ಮಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಬಡ ರೈತರು ಒಕ್ಕಲುತನ ಮಾಡುತ್ತಿರುವ ಜಮೀನನ್ನು ಅವರಿಗೆ ಹಸ್ತಾಂತರಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು)

ಶ್ರೀ ಕೆ. ಹೆಚ್. ರಂಗನಾಥ್ (ಅರಣ್ಯ ಮತ್ತು ಜೀವಿಶಾಸ್ತ್ರ ಸಚಿವರು):